ಗುರುತಿಸಿ ಸ್ಥಳಾಂತರಿಸಲು ಶಿಫಾರಸ್ಸು ಮಾಡಲು ಸರ್ಕಾರದ ಆದೇಶ ಸಂಖ್ಯೆ: ಕಂಇ 215 ಆರ್‌ಇಹೆಚ್ 2008, ದಿನಾಂಕ: 11–12–2008, ರಂತೆ ಪ್ರಾದೇಶಿಕ ಆಯುಕ್ತರು, ಮೈಸೂರು, ಇವರ ಅಧ್ಯಕ್ಷತೆಯಲ್ಲಿ ರಚಿತವಾದ ಉನ್ನತಮಟ್ಟದ ಸಮಿತಿಯ ಮುಂದೆ ಮಂಡಿಸಿ, ಸಮಿತಿಯ ಶಿಫಾರಸ್ಸಿನ ನಂತರ ಕ್ರಮ ಕೈಗೊಳ್ಳಲಾಗುವುದು.

306 ಶ್ರೀ ಕುಲಕರ್ಣಿ ಶ್ರೀಕಾಂತ್ ಸುಬ್ಬಾರಾವ್ : ಮಾನ್ಯ ಜಲ ಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವಿಜಾಪುರ ಜಿಲ್ಲೆಯಲ್ಲಿ ಎಷ್ಟು ಕಿ.ಮೀಟರ್ ಡೋಣಿ ನದಿ ಹರಿದಿದೆ ;

ಆ) ಈ ಡೋಣಿ ನದಿಯು ಮಳೆಗಾಲದಲ್ಲಿ ಉಕ್ಕಿ ಹರಿದು ಪಕ್ಕದ ಜಮೀನುಗಳಲ್ಲಿ ಹರಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಬಂದಿದ್ದಲ್ಲಿ, ಇದರ ಪರಿಹಾರಕ್ಕೆ ಸರ್ಕಾರದ ಯೋಜನೆ ಏನು; ಮತ್ತು ಯಾವಾಗ ಪ್ರಾರಂಭ ಮಾಡಲಾಗುವುದು?

ಶ್ರೀ ಬಸವರಾಜ ಬೊಮ್ಮಾಯಿ (ಜಲಸಂಪನ್ಮೂಲ ಸಚಿವರು) :

ಅ) ವಿಜಾಪುರ ಜಿಲ್ಲೆಯಲ್ಲಿ ಡೋಣಿ ನದಿಯು ಸುಮಾರು 158 ಕಿ.ಮೀ.ನಷ್ಟು ಉದ್ದಕ್ಕೆ ಹರಿದಿದೆ.

ಆ) ಬಂದಿದೆ.

ಇ) ಡೋ ನದಿಯಲ್ಲಿ ಸಮಸ್ಯಾತ್ಮಕ ಮಣ್ಣುಗಳ ಸುಧಾರಣೆ ಹಾಗೂ ಹೂಳೆತ್ತುವುದಕ್ಕಾಗಿ ಕೇಂದ್ರ ಸರ್ಕಾರದ ಭೂ ಸಂಪನ್ಮೂಲ ಇಲಾಖೆಯು ಕೃಷಿ ವಿಶ್ವವಿದ್ಯಾಲಯ, ಧಾರವಾಡದ ಮೂಲಕ ರೂ.4,82,35,300.00 ಗಳ ಅಂದಾಜು ಮೊತ್ತದಲ್ಲಿ ಮೂರು ವರ್ಷಗಳ ಅವಧಿಯೊಳಗೆ ಅನುಷ್ಠಾನಗೊಳಿಸಲು ಅನುಮೋದನೆ ನೀಡಿರುವ ಪೈಲೆಟ್ ಯೋಜನೆ ಇರುತ್ತದೆ.

ಈ ಯೋಜನೆಯನ್ನು ಸಣ್ಣ ನೀರಾವರಿ ಇಲಾಖೆಯಿಂದ ಶೀಘ್ರವಾಗಿ ಅನುಷ್ಠಾನಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.